# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 96(46) |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.08.2025. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಮನಗರ ಶೈಕ್ಷಣಿಕ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿಜ್ಞಾನ ಮತ್ತು ಗಣಿತ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ ವಿಜ್ಞಾನ ಮತ್ತು ಗಣಿತ ಶಿಕ್ಷಕರ ಸಂಖ್ಯೆ ಎಷ್ಟು; ಈ ಪೈಕಿ ಭರ್ತಿ ಮಾಡಿರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)</td><td>ರಾಮನಗರ ಶೈಕ್ಷಣಿಕ ಜಿಲ್ಲೆಯ ಸರ್ಕಾರಿ ಪ್ರಾಥಮಿಕ / ಪ್ರೌಢಶಾಲೆಗಳಲ್ಲಿ ಗಣಿತ-ವಿಜ್ಞಾನ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಮಂಜೂರಾಗಿರುವ / ಕಾರ್ಯನಿರತ / ಖಾಲಿ ಹುದ್ದೆಗಳ ವಿವರ:
<table>
<tr><th>ಶಾಲೆಗಳ ವಿಧ</th><th>ಮಂಜೂರಾತಿ</th><th>ಕಾರ್ಯನಿರತ</th><th>ಖಾಲಿ ಹುದ್ದೆಗಳು</th><th>ಷರಾ</th></tr>
<tr><td colspan="4">ಸರ್ಕಾರಿ ಪ್ರಾಥಮಿಕ</td><td></td></tr>
<tr><td>1-5 ಪಿ.ಎಸ್.ಟಿ 6-8 (ಜಿಪಿಟಿ)</td><td>940</td><td>206</td><td>393</td><td>ಉಳಿದ 341ಖಾಲಿ ಹುದ್ದೆಗಳಲ್ಲಿ ಪಿಎಸ್‌ಟಿ (1 ರಿಂದ 5)ನೇ ವೃಂದದ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ</td></tr>
<tr><td colspan="4">ಸರ್ಕಾರಿ ಪ್ರೌಢ</td><td></td></tr>
<tr><td>ಗಣಿತ ಪಿಸಿ ಎಂ</td><td>144</td><td>141</td><td>03</td><td rowspan="2"></td></tr>
<tr><td>ವಿಜ್ಞಾನ ಸಿಬಿಝೆಡ್</td><td>111</td><td>89</td><td>22</td></tr>
</table></td></tr>
<tr><td>ಆ)</td><td>ಖಾಲಿ ಇರುವ ವಿಜ್ಞಾನ ಮತ್ತು ಗಣಿತ ಶಿಕ್ಷಕರನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)</td><td>ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-<br>1. ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8ನೇ ತರಗತಿ) ವೃಂದದ ಒಟ್ಟು 15000 ಹುದ್ದೆಗಳ ನೇಮಕಾತಿಗಾಗಿ ದಿನಾಂಕ: 21.03.2022 ರಂದು ಅಧಿಸೂಚಿಸಲಾಗಿತ್ತು. ಈ ಪೈಕಿ ರಾಮನಗರ ಜಿಲ್ಲೆಗೆ ಗಣಿತ-ವಿಜ್ಞಾನ ಹುದ್ದೆಗಳಿಗೆ-45, ಹಾಗೂ ಜೀವ ವಿಜ್ಞಾನ ವಿಷಯದ -32 ಒಟ್ಟಾರೆ 77 ಅಭ್ಯರ್ಥಿಗಳು ನಿಯಮಾನುಸಾರ ಆಯ್ಕೆಯಾಗಿದ್ದು, ಕೌನ್ಸಿಲಿಂಗ್ ಮೂಲಕ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.</td></tr>
</table>

| | | |
|---|---|---|
| | | 2. ಮುಂದುವರೆದು, ರಾಮನಗರ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಅತಿಥಿ ಶಿಕ್ಷಕರುಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ. |

ಸಂಖ್ಯೆ: ಇಪಿ 266 ಪಿಜಿಸಿ 2025

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು